144ನೇ ಅಧಿವೇಶನ

ನಿ. 72

ಕ್ರಮ ಸಂಖ್ಯೆ. ~~188 ~~ 132

**ಕರ್ನಾಟಕ ವಿಧಾನ ಪರಿಷತ್ತಿನ ಮಾನ್ಯ ಸದಸ್ಯರಾದ ಶ್ರೀ ಶಶೀಲ್ ಜಿ. ನಮೋಶಿ ಇವರು ನಿಯಮ 72 ರಡಿಯಲ್ಲಿ ಪ್ರಸ್ತಾಪಿಸಿರುವ ಸೂಚನೆ.**

**ವಿಷಯ**

ಖಾಸಗಿ ಅನುದಾನಿತ ಪದವಿ ಮಹಾವಿದ್ಯಾಲಯಗಳಲ್ಲಿ 31.12.2015 ರೊಳಗಾಗಿ ನಿವೃತ್ತಿ, ನಿಧನ ಮತ್ತು ವರ್ಗಾವಣೆ ಮತ್ತಿತರ ಕಾರಣಗಳಿಂದ ತೆರವಾಗಿರುವ ಬೋಧಕ ಹುದ್ದೆಗಳನ್ನು ವಿದ್ಯಾರ್ಥಿಗಳ ಶೈಕ್ಷಣಿಕ ಹಿತದೃಷ್ಟಿಯಿಂದ ಕೂಡಲೇ ಭರ್ತಿ ಮಾಡುವ ಕುರಿತು.

**ಉತ್ತರ**

ಸರ್ಕಾರದ ಪತ್ರ ಸಂಖ್ಯೆ:ಇಡಿ/240/ಯುಪಿಸಿ/2014, ದಿನಾಂಕ:01.09.2017 ರಲ್ಲಿ ಖಾಸಗಿ ಅನುದಾನಿತ ಪದವಿ ಕಾಲೇಜುಗಳಲ್ಲಿ, ದಿನಾಂಕ:31.12.2015 ರೊಳಗೆ ನಿವೃತ್ತಿ, ಮರಣ, ರಾಜೀನಾಮೆ ಹಾಗೂ ಇತರೆ ಕಾರಣಗಳಿಂದ ಖಾಲಿ ಇರುವ ಬೋಧಕ ಹುದ್ದೆಗಳನ್ನು ನಿಯಮಾನುಸಾರ ಭರ್ತಿ ಮಾಡಿಕೊಳ್ಳಲು ಅನುಮತಿ ನೀಡಲಾಗಿದ್ದು, ಅದರಂತೆ ಹುದ್ದೆಗಳನ್ನು ಭರ್ತಿ ಮಾಡಲು ಇಲಾಖಾವತಿಯಿಂದ ಕ್ರಮವಹಿಸಲಾಗುತ್ತಿತ್ತು.

ಆದರೆ ಆರ್ಥಿಕ ಇಲಾಖೆಯ ಸುತ್ತೋಲೆ ಸಂಖ್ಯೆ:ಆಇ/157/ವೆಚ್ಚ-8/2020, ದಿನಾಂಕ:10.06.2020 ರನ್ವಯ "ಕೋವಿಡ್-19ರ ಹಿನ್ನೆಲೆಯಲ್ಲಿ ರಾಜ್ಯದಲ್ಲಿ ತೀವ್ರ ಆರ್ಥಿಕ ಸಂಕಷ್ಟ ಸೃಷ್ಟಿಯಾಗಿರುವುದರಿಂದ, ಖಾಸಗಿ ಅನುದಾನಿತ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಖಾಲಿ ಇರುವ ಹುದ್ದೆಗಳನ್ನು 2020-21ನೇ ಸಾಲಿನಲ್ಲಿ ಭರ್ತಿ ಮಾಡುವಂತಿಲ್ಲ, ಖಾಲಿ ಹುದ್ದೆಗಳನ್ನು ಭರ್ತಿ ಮಾಡಿಕೊಳ್ಳಲು ಹೊಸದಾಗಿ ಸಹಮತಿ ನೀಡುವಂತಿಲ್ಲ, ಹುದ್ದೆಗಳನ್ನು ವೇತನಾನುದಾನಕ್ಕೆ ಒಳಪಡಿಸುವಂತಿಲ್ಲ, ಕಲ್ಯಾಣ ಕರ್ನಾಟಕ ವೃಂದದ ಹುದ್ದೆಗಳು ಮತ್ತು ಬ್ಯಾಕ್‌ಲಾಗ್ ಹುದ್ದೆಗಳೂ ಸೇರಿದಂತೆ ಎಲ್ಲಾ ನೇರ ನೇಮಕಾತಿ ಹುದ್ದೆಗಳನ್ನು ಭರ್ತಿ ಮಾಡುವುದನ್ನು ಮುಂದಿನ ಆದೇಶದವರೆಗೆ ತಡೆಹಿಡಿಯಲಾಗಿದೆ. ಈಗಾಗಲೇ ಆರ್ಥಿಕ ಇಲಾಖೆಯ ಸಹಮತಿ ಪಡೆದು ನೇಮಕಾತಿಯ ವಿವಿಧ ಹಂತಗಳಲ್ಲಿರುವ ಹುದ್ದೆಗಳಿಗೂ ಸಹ ಈ ಆದೇಶ ಅನ್ವಯವಾಗುತ್ತದೆ. ಆದ್ದರಿಂದ ಮುಂದಿನ ಆದೇಶದವರೆಗೆ ಈ ಬಗ್ಗೆ ಯಾವುದೇ ಕ್ರಮ ಕೈಗೊಳ್ಳದಂತೆ" ನಿರ್ದೇಶಿಸಲಾಗಿದೆ.

ಆದಾಗ್ಯೂ, ಬೋಧಕರ ಖಾಲಿ ಹುದ್ದೆಗಳನ್ನು ಭರ್ತಿ ಮಾಡುವ ಪ್ರಕರಣಕ್ಕೆ ಸಂಬಂಧಿಸಿದಂತೆ ಸರ್ಕಾರ ಹಾಗೂ ಇಲಾಖೆಯ ವಿವಿಧ ಹಂತಗಳಲ್ಲಿ ಬಾಕಿ ಇರುವ ಹುದ್ದೆಗಳನ್ನು ಭರ್ತಿ ಮಾಡುವ ಸಂಬಂಧ ಆರ್ಥಿಕ ಇಲಾಖೆಯ ಸಹಮತಿ ಕೋರಿ ಕಡತ ಸಲ್ಲಿಸಿದೆ. ಆರ್ಥಿಕ ಇಲಾಖೆಯ ಮಿತವ್ಯಯ ಆದೇಶ ತೆರವುಗೊಳಿಸಿ ಖಾಲಿ ಹುದ್ದೆ ಭರ್ತಿಗೆ ಅನುಮತಿ ನೀಡಿದ ನಂತರ ಖಾಲಿ ಹುದ್ದೆಗಳನ್ನು ಭರ್ತಿ ಮಾಡಲು ನಿಯಮಾನುಸಾರ ಕ್ರಮ ಕೈಗೊಳ್ಳಲಾಗುವುದು.

ಇಡಿ 126 ಯುಪಿಸಿ 2021

**(ಡಾ: ಅಶ್ವಥ್ ನಾರಾಯಣ ಸಿ.ಎನ್.)**
ಉನ್ನತ ಶಿಕ್ಷಣ,ಐಟಿಬಿಟಿ, ವಿಜ್ಞಾನ ಮತ್ತು
ತಂತ್ರಜ್ಞಾನ, ವಿದ್ಯುನ್ಮಾನ ಮತ್ತು
ಕೌಶಲ್ಯಾಭಿವೃದ್ಧಿ, ಜೀವನೋಪಾಯಹಾಗೂ
ಉದ್ಯಮಶೀಲತೆ ಸಚಿವರು